5

**ಕರ್ನಾಟಕ ಸರ್ಕಾರ**

**ಸಂಖ್ಯೆ:**ಗ್ರಾಅಪಂರಾ 497 ಜಿಪಸ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 10-11-2022.

**ಸುತ್ತೋಲೆ**

**ವಿಷಯ:** ರಾಜ್ಯದಲ್ಲಿ ದನ ಮತ್ತು ಎಮ್ಮೆಗಳಲ್ಲಿ ಕಾಣಿಸಿಕೊಂಡಿರುವ ಚರ್ಮಗಂಟು ರೋಗ (Lumpy Skin Disease)ದ ನಿಯಂತ್ರಣ ಕುರಿತು.

*****

ಕರ್ನಾಟಕ ರಾಜ್ಯಾದ್ಯಂತ ದನ ಮತ್ತು ಎಮ್ಮೆಗಳಲ್ಲಿ ಚರ್ಮಗಂಟು ರೋಗ (Lumpy Skin Disease) ಕಾಣಿಸಿಕೊಂಡಿದ್ದು, ಸುಮಾರು 5865 ಜಾನುವಾರುಗಳು ಇದುವರೆಗೆ ಮೃತಪಟ್ಟಿರುತ್ತವೆ. ಇದರಿಂದ ರೈತರು ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಚರ್ಮಗಂಟು ರೋಗವು (LSD) ಒಂದು ವೈರಾಣುವಿನ ಖಾಯಿಲೆಯಾಗಿದ್ದು, ಇದು ಪ್ರಮುಖವಾಗಿ ಸೊಳ್ಳೆ, ಕಚ್ಚುವ ನೊಣ, ಉಣ್ಣೆ ಇತ್ಯಾದಿ ಕೀಟಗಳಿಂದ ಹರಡುತ್ತದೆ. ಆದುದರಿಂದ ಈ ರೋಗದ ನಿಯಂತ್ರಣಕ್ಕೆ ಲಸಿಕೆ ಹಾಕುವುದರ ಜೊತೆಗೆ ಸೊಳ್ಳೆ, ಕೀಟಗಳ ಹಾಗೂ ನೊಣಗಳ ನಿಯಂತ್ರಣ ಮಾಡುವುದು ತೀರ ಅವಶ್ಯವಿರುತ್ತದೆ. ಗ್ರಾಮಗಳಲ್ಲಿರುವ ಎಲ್ಲಾ ಜೌಗು ಪ್ರದೇಶಗಳಲ್ಲಿ ಹಾಗೂ ರೈತರ ಜಾನುವಾರುಗಳ ಕೊಟ್ಟಿಗೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೊಣ, ಸೊಳ್ಳೆಗಳು ಉತ್ಪತ್ತಿಯಾಗದಂತೆ ಕೀಟನಾಶಕಗಳನ್ನು ಸಿಂಪಡಿಸುವುದು ಹಾಗೂ FOGGING ಮಾಡುವುದು ತೀರ ಅವಶ್ಯಕವಾಗಿರುತ್ತದೆ.

ಆದುದರಿಂದ, ಜಾನುವಾರುಗಳಲ್ಲಿ ಚರ್ಮಗಂಟು ರೋಗವನ್ನು ತಡೆಗಟ್ಟಲು ನೊಣ , ಸೊಳ್ಳೆಗಳ ಮತ್ತು ಕಚ್ಚುವ ಕೀಟಗಳ ನಿಯಂತ್ರಣಕ್ಕಾಗಿ ಗ್ರಾಮಗಳಲ್ಲಿನ ಜೌಗು ಪ್ರದೇಶಗಳಲ್ಲಿ, ರೈತರ ಜಾನುವಾರುಗಳ ಕೊಟ್ಟಿಗೆ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಕೀಟನಾಶಕಗಳನ್ನು ಸಿಂಪಡಿಸುವುದು, Fogging and sanitization ಇತ್ಯಾದಿ ಕ್ರಮಗಳನ್ನು ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ವ್ಯಾಪ್ತಿಯಲ್ಲಿನ ಎಲ್ಲಾ ಗ್ರಾಮಗಳಲ್ಲಿ ತುರ್ತಾಗಿ ಕೈಗೊಳ್ಳುವಂತೆ ಈ ಮೂಲಕ ಸೂಚಿಸಿದೆ.

10/11/2022
(ಎಲ್.ಕೆ.ಅತೀಕ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮೂಲಕ).

3. ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಕಾರ್ಯನಿರ್ವಾಹಕ ಅಧಿಕಾರಿಗಳು ಮೂಲಕ).
4. ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ – ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು.
5. ಶಾಖಾ ರಕ್ಷ ಕಡತ.

**ಪ್ರತಿಯನ್ನು ಮಾಹಿತಿಗಾಗಿ:-**

1. ಸರ್ಕಾರದ ಕಾರ್ಯದರ್ಶಿ, ಪಶುಸಂಗೋಪನಾ ಇಲಾಖೆ, ಸಂ.405, 4ನೇ ಮಹಡಿ, ವಿಕಾಸ ಸೌಧ, ಬೆಂಗಳೂರು-560001.
2. ಆಯುಕ್ತರು, ಪಶುಪಾಲನಾ ಭವನ, ಪಶುವೈದ್ಯಕೀಯ ಮತ್ತು ಪಶುಸೇವಾ ಇಲಾಖೆ, ಹೆಬ್ಬಾಳ, ಬೆಂಗಳೂರು-560024.
3. ಆಯುಕ್ತರು, ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ, ಕಾಳಿದಾಸ ಮಾರ್ಗ, ಕೆ.ಜಿ. ರಸ್ತೆ, ಬೆಂಗಳೂರು.
4. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, 5ನೇ ಮಹಡಿ, ಪ್ಲಾಟ್ ನಂ.1-4, ಕೆ.ಎಸ್.ಐ.ಐ.ಡಿ.ಸಿ. ಕಟ್ಟಡ, ಐಟಿ ಪಾರ್ಕ್, ಸೌತ್ ಬ್ಲಾಕ್, ರಾಜಾಜಿನಗರ ಇಂಡಸ್ಟ್ರೀಯಲ್ ಎಸ್ಟೇಟ್, ಬೆಂಗಳೂರು-560010.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯವರ ಹಿರಿಯ ಆಪ್ತ ಕಾರ್ಯದರ್ಶಿ.
7. ಸರ್ಕಾರದ ಜಂಟಿ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಸಹಾಯಕ.